A-PDF Merger DEMO : Purchase from www.A-PDF.com to remove the watermark

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉತ್ತರ ಕನ್ನಡ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸುವ ಬಗ್ಗೆ

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಸಕಇ 153 ಎಸ್‌ಎಲ್‌ಪಿ 2013. ದಿನಾಂಕ: 08-10-2013

2) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಇವರ ನಡವಳ ಸಂಖ್ಯೆ:ಉಶಿಪ್ರಸ/947/2014 ದಿನಾಂಕ: 20-01-2014

****

**ಪ್ರಸ್ತಾವನೆ:-**

ಮೇಲೆ (1)ರಲ್ಲಿ ಓದಲಾದ ದಿನಾಂಕ:08-10-2013ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿ/ಹಾಡಿ/ಪೋಡು/ಹಟ್ಟಿ/ಓಣಿ/ಕೇರಿಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಒಡೊಂದು ಕಾಲೋನಿಯಲ್ಲಿ ಕನಿಷ್ಠ 6.00ಲಕ್ಷ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆಗಳನ್ನು ನಿರ್ಮಿಸಲು ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ (2).ರಲ್ಲಿ ಓದಲಾದ ದಿನಾಂಕ:20-01-2014ರ ಪತ್ರದಲ್ಲಿ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಉತ್ತರ ಕನ್ನಡ ಜಿಲ್ಲೆಯ ಬಹುತೇಕ ಅರಣ್ಯ ಪ್ರದೇಶದಲ್ಲಿದ್ದು. ಬುಡಕಟ್ಟು ಜನಾಂಗದ ಎಲ್ಲಾ ಸಮೂಹಗಳು ಒಂದೇ ಕಡೆ ವಾಸಿಸುತ್ತಿಲ್ಲದೇ ಅಲ್ಲೊಂದು-ಇಲ್ಲೊಂದು ಮನೆಗಳಿರುವುದರಿಂದ ಕಾಲೋನಿಗಳಲ್ಲಿ ರಸ್ತೆ ನಿರ್ಮಿಸಲು ಸಾಧ್ಯವಿರುವುದಿಲ್ಲ. ಈ ಒಂಟಿ ಮನೆಗಳಿರುವ ಜನ ಒಂದು ಕಡೆಯಿಂದ ಮತ್ತೊಂದು ಕಡೆ ತಲುಪಬೇಕಾದರೆ ಚಿಕ್ಕ ಚಿಕ್ಕ ಹಳ್ಳಗಳನ್ನು ದಾಟಿಕೊಂಡು ಹೋಗಬೇಕಾಗಿರುತ್ತದೆ. ಆದ್ದರಿಂದ ಈ ಯೋಜನೆಯಡಿ ಕಾಲೋನಿ ಸಿಮೆಂಟ್ ರಸ್ತೆ ನಿರ್ಮಾಣದ ಆದೇಶವನ್ನು ಬದಲು ಮಾಡಿ ಈ ಹಣವನ್ನು ಬುಡಕಟ್ಟು ಜನಾಂಗದವರಿಗೆ ಅವಶ್ಯವಿರುವ ಸೇತುವೆ ಅಥವಾ ಇನ್ನಿತರೆ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲು ಷರತ್ತಿನ ವಿನಾಯಿತಿ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಸಕಇ 50 ಎಸ್‌ಎಲ್‌ಪಿ 2014, ಬೆಂಗಳೂರು ದಿನಾಂಕ: 25-02-2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ. ಉತ್ತರ ಕನ್ನಡ ಜಿಲ್ಲೆಗೆ ಸೀಮಿತಗೊಳಿಸಿ. ಬುಡಕಟ್ಟು ಜನಾಂದವರು ವಾಸಿಸುತ್ತಿರುವ ಕಾಲೋನಿಗಳಿಗೆ ಮೂಲಭೂತ ಸೌಕರ್ಯಕ್ಕಾಗಿ ಈಗಿರುವ

ಕಾಮಗಾರಿಗಳ ಜೊತೆಗೆ ಅವಶ್ಯಕವಿರುವ ಕಡೆ ಕಿರುಸೇತುವೆ ಸಹ ನಿರ್ಮಿಸಲು ವಿಶೇಷ ಪ್ರಕರಣವೆಂದು ಪರಿಗಣಿಸಿ ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಸದರಿ ಕಾಮಗಾರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಗಳಲ್ಲಿನ ಪಾರದರ್ಶಕತೆ ಅಧಿನಿಯಮ 1999 ಹಾಗೂ ಅದರಡಿ ರೂಪಿಸಿರುವ ನಿಯಮಗಳಲ್ಲಿ ನಮೂದಿಸಿರುವ ಕಾರ್ಯವಿಧಾನವನ್ನು ಅನುಸರಿಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು.

ಸದರಿ ಕಾಮಗಾರಿಗಳನ್ನು ಎರಡು ವರ್ಷಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ನರಸಿಂಹಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1.
ಸಮಾಜ ಕಲ್ಯಾಣ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4) ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ.
5) ಮುಖ್ಯಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಜಿಲ್ಲೆ.
6) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ, ಉತ್ತರ ಕನ್ನಡ ಜಿಲ್ಲೆ.
7) ಶಾಖಾ ರಕ್ಷಾ ಕಡತ.
8) ಹೆಚ್ಚುವರಿ ಪ್ರತಿಗಳು-03.